ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1502
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 10-03-2022
ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯ ಸರ್ಕಾರಿ ನೌಕರರ ವೇತನ ಭತ್ಯೆ ಪರಿಷ್ಕರಣೆ ಸಂಬಂಧ 7ನೇ ವೇತನ ಆಯೋಗವನ್ನು ರಚಿಸಲು ಸರ್ಕಾರ ಚಿಂತಿಸುವುದೇ;	ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ವೇತನ ಆಯೋಗಗಳ ಶಿಫಾರಸ್ಸು ಹಾಗೂ ಕೇಂದ್ರ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ/ವೇತನ ಸಮಿತಿಗಳ ಶಿಫಾರಸ್ಸಿನ ಮೇರೆಗೆ, ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ತುಟ್ಟಿಭತ್ಯೆಯೂ ಸೇರಿದಂತೆ ಇತರೆ ಭತ್ಯೆಗಳನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಿಸಿಕೊಂಡು ಬರಲಾಗಿರುತ್ತದೆ. ಇದು ಸರ್ಕಾರದ ನೀತಿಯಾಗಿರುತ್ತದೆ. ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗದ ಶಿಫಾರಸ್ಸುಗಳು ರಾಜ್ಯ ಸರ್ಕಾರದ ನೌಕರರಿಗೆ ಅನ್ವಯಿಸುವುದಿಲ್ಲ. ಆದುದರಿಂದ, ಕೇಂದ್ರ ಸರ್ಕಾರದ ಹುದ್ದೆ ಮತ್ತು ಹುದ್ದೆಗಳಿಗೆ ನಿಗದಿಪಡಿಸಿರುವ ವೇತನ ಶ್ರೇಣಿ ಮತ್ತು ಭತ್ಯೆಗಳನ್ನು ರಾಜ್ಯ ಸರ್ಕಾರದ ಹುದ್ದೆಗಳಿಗೆ ಅನ್ವಯಿಸಿ ಹೋಲಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ವೇತನ ಪರಿಷ್ಕರಣೆಯ ವಿಷಯವು ಸರ್ಕಾರದ
(ಆ)	ಕೇಂದ್ರ ಸರ್ಕಾರಿ ನೌಕರರು ಪಡೆಯುತ್ತಿರುವ ವೇತನಕ್ಕೆ ಸಮಾನಾಂತವಾಗಿ ರಾಜ್ಯ ಸರ್ಕಾರಿ ನೌಕರರಿಗೂ ವೇತನ ಹಾಗೂ ಭತ್ಯೆಗಳನ್ನು ಪರಿಷ್ಕರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;	

		ನೀತಿ ನಿರ್ಣಯಕ್ಕೆ ಸಂಬಂಧಿಸಿದ್ದಾಗಿದ್ದು, ಈ ಬಗ್ಗೆ ಸರ್ಕಾರದ ಆಯವ್ಯಯ ಸ್ಥಿತಿಗತಿಗಳನ್ನು ಗಮನದಲ್ಲಿರಿಸಿ ಸಂದರ್ಭಾನುಸಾರ ಕ್ರಮ ಕೈಗೊಳ್ಳಲಾಗುವುದು.
(ಇ)	ರಾಜ್ಯದಲ್ಲಿ ದಿನಾಂಕ: 1-4-2006ರ ನಂತರ ಹೊಸ ಪಿಂಚಣಿ ಯೋಜನೆ ಜಾರಿಯಾದ ನಂತರ ಖಾಸಗಿ/ಸರ್ಕಾರಿ ನೌಕರರಿಗೆ ಆರ್ಥಿಕ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ
(ಈ)	ಹಾಗಾದರೆ ಯಾವ ಕಾಲಮಿತಿಯಲ್ಲಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದು?	ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ.

ಸಂ: ಆಇ 13 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ